**Akashvani : Bangalore**
**Regional Bulletin In Kannada**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**02.12.2024** **14.30 hrs**

**<><*<><>*><>**

ಮುಖ್ಯಾಂಶಗಳು

- ೧. ತುಮಕೂರಿನಲ್ಲಿ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣಕ್ಕೆ ಭೂಮಿ ಪೂಜೆ ನೆರವೇರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ
- ೨. ೨೦೩೨ರ ವೇಳೆಗೆ ಕರ್ನಾಟಕ ಸಾಬೂನು ಮತ್ತು ಮಾರ್ಜಕ ಸಂಸ್ಥೆಯಿಂದ ೮ ಸಾವಿರ ಕೋಟಿ ವಹಿವಾಟಿನ ಗುರಿ
- ೩. ರಾಜ್ಯ ನಾಯಕತ್ವದ ವಿರುದ್ಧ ಅಸಮಾಧಾನ- ಶಾಸಕ ಬಸನಗೌಡ ಯತ್ನಾಳ್‌ಗೆ ಬಿಜೆಪಿ ಶೋಕಾಸ್ ನೋಟಿಸ್
- ೪. ಫೆಂಗಲ್ ಚಂಡಮಾರುತ ಹಿನ್ನಲೆ; ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಮಳೆ; ಜನಜೀವನ ಅಸ್ತವ್ಯಸ್ತ

**<><*<><>*><>**

ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕಾಗಿ ತುಮಕೂರಿನಲ್ಲಿ ಒಟ್ಟು ೫೦ ಎಕರೆ ಜಾಗವನ್ನು ಕರ್ನಾಟಕ ಕ್ರಿಕೆಟ್ ಸಂಸ್ಥೆಗೆ ನೀಡಲಾಗಿದ್ದು ಇದು ಜಿಲ್ಲೆಯ ಆರ್ಥಿಕ ಬೆಳವಣಿಗೆ ಮತ್ತು ಅಭಿವೃದ್ಧಿಗೆ ಪೂರಕ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ತುಮಕೂರಿನ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕೆ ಬ್ಯಾಟಿಂಗ್ ಮಾಡುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು ಆದಷ್ಟು ಶೀಘ್ರವೇ ಕ್ರೀಡಾಂಗಣ ನಿರ್ಮಾಣ ಮುಗಿಸಿ ಕ್ರಿಕೆಟ್ ಪ್ರೇಮಿಗಳ ನಿರೀಕ್ಷೆ ಪೂರೈಸಲಾಗುವುದು ಎಂದು ಹೇಳಿದ್ದಾರೆ. ಮೈಸೂರಿನಲ್ಲೂ ಕ್ರೀಡಾಂಗಣ ನಿರ್ಮಾಣಕ್ಕೆ ಕರ್ನಾಟಕ ಕ್ರಿಕೆಟ್ ಸಂಸ್ಥೆ ಬೇಡಿಕೆ ಮುಂದಿಟ್ಟಿದ್ದು ಮೈಸೂರಿನಲ್ಲೂ ಜಾಗ ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ:ಮುಖ್ಯಮಂತ್ರಿ ಸಿದ್ದರಾಮಯ್ಯ

ಗೃಹ ಸಚಿವ ಡಾ.ಜಿ.ಪರಮೇಶ್ವರ್ ಮಾತನಾಡಿ, ಚೆನ್ನೈ-ಮುಂಬೈ ಇಂಡಸ್ಟ್ರೀಯಲ್ ಕಾರಿಡಾರ್ ಗಾಗಿ ಆರು ಹಂತದಲ್ಲಿ ೨೦ ಸಾವಿರ ಎಕರೆ ಸ್ವಾಧೀನ ಮಾಡಲಾಗುವುದು ಎಂದು ತಿಳಿಸಿದ್ದಾರೆ. ವಸಂತನರಸಾಪುರದಲ್ಲಿ ಏಷ್ಯಾದಲ್ಲಿಯೇ ಅತಿ ದೊಡ್ಡ ಟೌನ್ ಶಿಪ್ ಪ್ರಾರಂಭವಾಗಿದೆ ಎಂದು ತಿಳಿಸಿದ ಅವರು, ಸ್ಥಳೀಯರಿಗೆ ಉದ್ಯೋಗ ನೀಡಬೇಕು ಎಂದು ಕೈಗಾರಿಕೆಗಳಿಗೆ ಮನವಿ ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

೨೦೩೨ರ ವೇಳೆಗೆ ಕರ್ನಾಟಕ ಸಾಬೂನು ಮತ್ತು ಮಾರ್ಜಕ ಸಂಸ್ಥೆಯಿಂದ ೮ ಸಾವಿರ ಕೋಟಿ ವಹಿವಾಟಿನ ಗುರಿ ಹೊಂದಲಾಗಿದೆ ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಶತಮಾನದ ಇತಿಹಾಸವಿರುವ ನಮ್ಮ ನಾಡಿನ

ಹೆಮ್ಮೆಯ ಕೆಎಸ್‌ಡಿಎಲ್ ಸಂಸ್ಥೆಯ ವಾರ್ಷಿಕ ವಹಿವಾಟನ್ನು ಹೆಚ್ಚಿಸುವ ಗುರಿ ಹೊಂದಲಾಗಿದೆ. ನಷ್ಟದ ಹಾದಿಯಲ್ಲಿದ್ದ ಈ ಸಂಸ್ಥೆಗೆ ಕಾಯಕಲ್ಪ ನೀಡಿ, ಕಾರ್ಯತಂತ್ರ ರೂಪಿಸಿದ್ದರ ಪರಿಣಾಮ ಕಳೆದ ಒಂದು ವರ್ಷದಿಂದ ಲಾಭದಾಯಕವಾಗಿ ಮುನ್ನಡೆಯುತ್ತಿದೆ ಎಂದು ತಿಳಿಸಿದ್ದಾರೆ. ಸಂಸ್ಥೆಯ ಯಶಸ್ಸಿಗೆ ಶ್ರಮಿಸುತ್ತಿರುವ ಕರ್ನಾಟಕ ಸಾಬೂನು ಮತ್ತು ಮಾರ್ಜಕ ಸಂಸ್ಥೆಯ ಸದಸ್ಯರಿಗೆ ಧನ್ಯವಾದ ತಿಳಿಸಿದ್ದಾರೆ.

<><*<><>*><>

ಪಕ್ಷದ ನಾಯಕರ ವಿರುದ್ಧ ನಿರಂತರವಾಗಿ ಹೇಳಿಕೆ ನೀಡುತ್ತಿರುವ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರಿಗೆ ಶೋಕಾಸ್ ನೋಟಿಸ್ ನೀಡಲಾಗಿದೆ. ಬಿಜೆಪಿಯ ಕೇಂದ್ರ ಶಿಸ್ತು ಸಮಿತಿ ನೀಡಿರುವ ಶೋಕಾಸ್ ನೋಟಿಸ್‌ನಲ್ಲಿ ನಾಯಕರ ವಿರುದ್ಧ ಮಾಡುತ್ತಿರುವ ಆರೋಪಗಳು ಪಕ್ಷದ ಶಿಸ್ತಿನ ಸ್ಪಷ್ಟ ಉಲ್ಲಂಘನೆಯಾಗಿದೆ. ನಿಮ್ಮ ವಿರುದ್ಧ ಕ್ರಮ ಕೈಗೊಳ್ಳಬಾರದು ಏಕೆ ಎಂಬ ಬಗ್ಗೆ ಹತ್ತು ದಿನಗಳ ಒಳಗೆ ವಿವರಣೆ ನೀಡುವಂತೆ ಸೂಚಿಸಿದೆ. ಇದಕ್ಕೆ ಪ್ರತಿಕ್ರಿಯಿಸಿರುವ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ಬಿಜೆಪಿ ಶಿಸ್ತು ಸಮಿತಿ ನೀಡಿರುವ ನೋಟಿಸ್‌ಗೆ ಉತ್ತರ ನೀಡಲಾಗುವುದು ಎಂದು ತಿಳಿಸಿದ್ದಾರೆ. ಹಿಂದುತ್ವ ಪರ ಭ್ರಷ್ಟಾಚಾರ, ವಕ್ಫ್ ಆಸ್ತಿ ವಿಚಾರ, ಕುಟುಂಬ ರಾಜಕಾರಣದ ವಿರುದ್ಧ ಹೋರಾಟದಲ್ಲಿ ತಮ್ಮ ಬದ್ಧತೆಯು ಅಚಲವಾಗಿ ಉಳಿಯಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಮಂಡ್ಯ ಜಿಲ್ಲೆಯ ಕೆ.ಆರ್.ಎಸ್. ಅಣೆಕಟ್ಟೆಯ ಹಿನ್ನೀರಿನ ಪ್ರದೇಶದಲ್ಲಿ ಎರಡು ಕಾಡಾನೆಗಳು ದಾಂಧಲೆ ನಡೆಸಿವೆ. ಅಣೆಕಟ್ಟೆಯ ಹಿನ್ನೀರಿನ ಪ್ರದೇಶವಾದ ಕೆ.ಆರ್.ಪೇಟೆ ತಾಲ್ಲೂಕಿನ ಅಂಬಿಗರಹಳ್ಳಿಯ ಸಂಗಮದ ಸಮೀಪ ರೈತರ ಜಮೀನಿನಲ್ಲಿ ಬೆಳೆ ಹಾನಿಗೊಳಿಸಿವೆ. ರೈತರು ಬೆಳೆದ ಅಡಿಕೆ, ತೆಂಗು, ಬಾಳೆ, ಭತ್ತ ಸೇರಿದಂತೆ ಬೆಳೆಗಳನ್ನು ಧ್ವಂಸ ಮಾಡಿವೆ. ಜೋಡಿ ಆನೆಗಳ ದಾಂದಲೆಗೆ ರೈತರು ಕಂಗಾಲಾಗಿದ್ದಾರೆ. ಕಳೆದ ಎರಡು ದಿನಗಳಿಂದ ಆನೆಗಳನ್ನು ಕಾಡಿಗಟ್ಟಲು ಮಳೆಯ ನಡುವೆ ಅರಣ್ಯ ಅಧಿಕಾರಿಗಳು ಹರಸಾಹಸಪಡುತ್ತಿದ್ದಾರೆ.

<><*<><>*><>

ಬೀದಿ ಬದಿ ವ್ಯಾಪಾರಸ್ಥರ ಸರ್ವತೋಮುಖ ಅಭಿವೃದ್ಧಿಗಾಗಿ ಪ್ರಧಾನ ಮಂತ್ರಿ ಸ್ವ ನಿಧಿ ಯೋಜನೆಯ ವೇಗವನ್ನು ಮತ್ತಷ್ಟು ಹೆಚ್ಚಿಸುವ ಸಲುವಾಗಿ ದಾವಣಗೆರೆ ಜಿಲ್ಲೆಯ ಎಲ್ಲ ನಗರ ಸ್ಥಳಿಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಪಖ್ವಾಡ ಶಿಬಿರಗಳನ್ನು ವಿವಿಧ ಬ್ಯಾಂಕುಗಳಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಆಸಕ್ತ ಬೀದಿ ಬದಿ ವ್ಯಾಪಾರಿಗಳಿಗೆ ಸಾಲ ಮಂಜೂರಾತಿ, ಡಿಜಿಟಲ್ ವಹಿವಾಟು ಮತ್ತು ಸಾಮಾಜಿಕ ಭದ್ರತಾ ಯೋಜನೆಗಳ ಕುರಿತು ಶಿಬಿರದಲ್ಲಿ ಮಾಹಿತಿ ನೀಡಲಾಗುತ್ತಿದೆ. ಆಸಕ್ತ ಬೀದಿ ಬದಿ ವ್ಯಾಪಾರಿಗಳು ಇದರ ಪ್ರಯೋಜನ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿ ಸೂಚಿಸಿದ್ದಾರೆ.

<><*<><>*><>

ಫೆಂಗಲ್ ಚಂಡಮಾರುತ ಪರಿಣಾಮ ರಾಜ್ಯದ ವಿವಿಧೆಡೆ ಮಳೆಯಾಗುತ್ತಿದೆ. ಬೆಂಗಳೂರು ನಗರ ಜಿಲ್ಲೆಯಲ್ಲಿ ಯೆಲ್ಲೋ ಅಲರ್ಟ್ ಘೋಷಣೆ ಮಾಡಲಾಗಿದೆ. ಬೆಳಗ್ಗೆಯಿಂದಲೇ ಬೆಂಗಳೂರಿನ ಹಲವೆಡೆ ಮಳೆ ಸುರಿಯುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಮಳೆಯಿಂದಾಗಿ ನಗರದಲ್ಲಿ ಚಳಿಯ ವಾತಾವರಣವಿದೆ. ಬೆಂಗಳೂರು ಗ್ರಾಮಾಂತರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಫೆಂಗಲ್ ಚಂಡ ಮಾರುತದ ಹಿನ್ನೆಲೆಯಲ್ಲಿ ಮಳೆ ಹಾಗೂ ಶೀತಗಾಳಿಯ ವಾತಾವರಣವಿದೆ. ಜಿಲ್ಲೆಯ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ರಜೆ ಘೋಷಿಸಿ ಜಿಲ್ಲಾಧಿಕಾರಿ ಆದೇಶಿಸಿದ್ದಾರೆ. ಕೃಷಿ

ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವ ರೈತರು ಮುಂಜಾಗ್ರತೆ ವಹಿಸಿ, ಬೆಳೆಗಳನ್ನು ರಕ್ಷಿಸಿಕೊಳ್ಳುವಂತೆ ಎಂದು ಜಿಲ್ಲಾಧಿಕಾರಿ ಡಾ.ಎನ್.ಶಿವಶಂಕರ್ ಮನವಿ ಮಾಡಿದ್ದಾರೆ. ಮೈಸೂರು ಜಿಲ್ಲೆಯಲ್ಲಿ ನಿರಂತರ ಮಳೆ ಸುರಿಯುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲೆಯ ಅಂಗನವಾಡಿ, ಶಾಲಾ - ಕಾಲೇಜುಗಳಿಗೆ ಇಂದು ರಜೆ ಘೋಷಣೆ ಮಾಡಿ ಮೈಸೂರು ಜಿಲ್ಲಾಧಿಕಾರಿ ಜಿ ಲಕ್ಷ್ಮಿಕಾಂತ ರೆಡ್ಡಿ ಆದೇಶಿಸಿದ್ದಾರೆ. ಮಂಡ್ಯ ಜಿಲ್ಲೆಯಲ್ಲಿ ನಿರಂತರ ಮಳೆ ಸುರಿಯುತ್ತಿರುವ ಹಿನ್ನೆಲೆಯಲ್ಲಿ ಶಾಲಾ-ಕಾಲೇಜುಗಳಿಗೆ ಜಿಲ್ಲಾಧಿಕಾರಿ ಡಾ. ಕುಮಾರ ರಜೆ ಘೋಷಿಸಿದ್ದಾರೆ. ರಾಮನಗರ ಜಿಲ್ಲೆಯಲ್ಲಿ ನಿರಂತರ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಮಧ್ಯಾಹ್ನದಿಂದ ನಾಳೆಯವರೆಗೆ ಜಿಲ್ಲೆಯ ಶಾಲೆ ಹಾಗೂ ಕಾಲೇಜುಗಳಿಗೆ ರಜೆ ಘೋಷಿಸಿ ಜಿಲ್ಲಾಧಿಕಾರಿ ಯಶವಂತ್‌ವಿ. ಗುರುಕರ್ ಆದೇಶ ನೀಡಿದ್ದಾರೆ. ಫೆಂಗಲ್ ಚಂಡ ಮಾರುತದ ಪರಿಣಾಮ ದಾವಣಗೆರೆ ಜಿಲ್ಲೆಯಲ್ಲೂ ಜನ ಜೀವನ ಬಾಧಿತಗೊಂಡಿದೆ. ಕಳೆದ ಮೂರು ದಿನಗಳಿಂದ ಜಿಲ್ಲಾದ್ಯಂತ ಮೋಡ ಮುಸುಕಿದ ವಾತಾವರಣ ಮತ್ತು ಶೀತಗಾಳಿಯಿಂದ ಸಾಮಾನ್ಯ ಜನ ಜೀವನ ಅಸ್ತವ್ಯಸ್ಥಗೊಂಡಿದ್ದು, ಭತ್ತ ಮತ್ತು ಮೆಕ್ಕೆಜೋಳ ಕಟಾವಿಗೂ ಶೀತಗಾಳಿಯಿಂದಾಗಿ ಅಡ್ಡಿ ಉಂಟಾಗಿದೆ. ಕೊಡಗು ಜಿಲ್ಲೆಯಾದ್ಯಂತ ಬೆಳಗ್ಗೆಯಿಂದಲೇ ಧಾರಾಕಾರ ಮಳೆಯಾಗುತ್ತಿದೆ. ಅಕಾಲಿಕ ಮಳೆಯಿಂದಾಗಿ ಕಾಫಿ ಹಾಗೂ ಭತ್ತದ ಫಸಲಿಗೂ ಸಮಸ್ಯೆಯಾಗಿದೆ. ಮಳೆಯ ಜೊತೆ ಕೊಡಗಿನಲ್ಲಿ ಚಳಿಯ ವಾತಾವರಣವಿದೆ.

<><*<><>*><>

ಫೆಂಗಲ್ ಚಂಡಮಾರುತದಿಂದ ಬೆಂಗಳೂರು ಮತ್ತು ರಾಜ್ಯದ ಹಲವು ಜಿಲ್ಲೆಗಳಲ್ಲಿ ಮುಂದಿನ ಎರಡು ದಿನಗಳ ಕಾಲ ಭಾರಿ ಮಳೆಯಾಗುವ ನಿರೀಕ್ಷೆ ಇದೆ. ಬೆಂಗಳೂರು ಸೇರಿದಂತೆ ಹಲವು ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಉಡುಪಿ ಮತ್ತು ಚಿಕ್ಕಮಗಳೂರು ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಹವಾಮಾನ ಇಲಾಖೆ ಮಾಹಿತಿಯಂತೆ ಕರಾವಳಿ ಕರ್ನಾಟಕ ಮತ್ತು ದಕ್ಷಿಣ ಒಳನಾಡಿನ ಕೆಲವು ಭಾಗಗಳಲ್ಲಿ ಇಂದು ಸಂಜೆ ವ್ಯಾಪಕ ಮಳೆಯಾಗುವ ಸಾಧ್ಯತೆಯಿದೆ. ನಾಳೆ ಸಾಧಾರಣ ಮಳೆಯಾಗುವ ಮುನ್ಸೂಚನೆ ಇದೆ. ಬೆಂಗಳೂರು, ಹಾಸನ, ಮಂಡ್ಯ ಮತ್ತು ರಾಮನಗರ ಜಿಲ್ಲೆಗಳಿಗೆ ಇಂದು ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆಯ ಬೆಂಗಳೂರು ವಿಭಾಗದ ನಿರ್ದೇಶಕ ಸಿಎಸ್ ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮೋಡಕವಿದ ವಾತಾವರಣವಿರಲಿದ್ದು, ಗರಿಷ್ಠ ತಾಪಮಾನ ಸುಮಾರು ೨೨ ಡಿಗ್ರಿ ಸೆಲ್ಸಿಯಸ್, ಕನಿಷ್ಠ ೧೯ ಡಿಗ್ರಿ ಸೆಲ್ಸಿಯಸ್ ತಾಪಮಾನವಿರಲಿದೆ.

<><*<><>*><>

ಮೈಸೂರು-ಹಾಸನ ರಸ್ತೆಯ ಕಿತ್ತಾನೆ ಬಳಿ ನಡೆದ ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡಿದ್ದ ಪ್ರೊಬೇಷನರಿ ಐಪಿಎಸ್ ಅಧಿಕಾರಿ ಹರ್ಷವರ್ಧನ್ ಅವರ ಮೃತದೇಹವನ್ನು ಸರ್ಕಾರಿ ಗೌರವದೊಂದಿಗೆ ಬೆಂಗಳೂರಿಗೆ ರವಾನಿಸಲಾಗಿದೆ. ಚಿಕಿತ್ಸೆ ಫಲಕಾರಿಯಾಗದೆ ಕಳೆದ ರಾತ್ರಿ ಹರ್ಷವರ್ಧನ್ ಸಾವನ್ನಪ್ಪಿದ್ದರು. ಬಳಿಕ ಸರ್ಕಾರಿ ಜಿಲ್ಲಾಸ್ಪತ್ರೆ ಶವಾಗಾರದಲ್ಲಿ ಮರಣೋತ್ತರ ಪರೀಕ್ಷೆಯ ಬಳಿಕ ಸ್ಥಳಕ್ಕೆ ದಕ್ಷಿಣ ವಲಯ ಐ.ಜಿ ಡಾ.ಬೋರಲಿಂಗಯ್ಯ ಸೇರಿದಂತೆ ಉನ್ನತ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಶ್ರದ್ಧಾಂಜಲಿ ಸಲ್ಲಿಸಿದರು. ಮೂಲತಃ ಬಿಹಾರ ಮೂಲದ ಹರ್ಷವರ್ಧನ್ ಮಧ್ಯಪ್ರದೇಶದ ರೇವಾ ಜಿಲ್ಲೆಯಲ್ಲಿ ವಾಸವಾಗಿದ್ದರು. ೨೦೨೨-೨೩ ರ ಐಪಿಎಸ್ ಬ್ಯಾಚ್‌ನಲ್ಲಿ ತೇರ್ಗಡೆ ಹೊಂದಿ ಕರ್ನಾಟಕ ಕೇಡರ್‌ನಲ್ಲಿ ರಾಜ್ಯಕ್ಕೆ ಆಯ್ಕೆಯಾಗಿದ್ದರು. ಹಾಸನದಲ್ಲಿ ಮೈಸೂರು ಹೆದ್ದಾರಿಯ ಕಿತ್ತಾನೆ ಗಡಿ ಬಳಿ ಸಂಭವಿಸಿದ ಭೀಕರ ಅಪಘಾತದಲ್ಲಿ ಪ್ರೊಬೆಷನರಿ ಐಪಿಎಸ್ ಅಧಿಕಾರಿ ಹರ್ಷಬರ್ಧನ್ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಂತಾಪ ಸೂಚಿಸಿದ್ದು ಮೃತರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಹೇಳಿದ್ದಾರೆ.

<><*<><>*><>

ಗೋವಾದಿಂದ ಬೆಂಗಳೂರಿಗೆ ತೆರಳುತ್ತಿದ್ದ ಖಾಸಗಿ ಬಸ್ ಪಲ್ಟಿಯಾಗಿ ಮೂವರು ಮಹಿಳೆಯರು ಸಾವನ್ನಪ್ಪಿರುವ ಘಟನೆ ಸಿರಾ ತಾಲ್ಲೂಕಿನ ಚಿಕ್ಕನಹಳ್ಳಿ ಬಳಿ ಸಂಭವಿಸಿದೆ. ಬೆಳಗಿನ ಜಾವ ೪:೪೫ ರಲ್ಲಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಬಸ್ ಪಲ್ಟಿಯಾಗಿದ್ದು, ತೀವ್ರವಾಗಿ ಗಾಯಗೊಂಡಿದ್ದ ಇಬ್ಬರು ಪ್ರಯಾಣಿಕರನ್ನು ತುಮಕೂರು ಸಿದ್ದಗಂಗಾ ಆಸ್ಪತ್ರೆಗೆ ದಾಖಲಿಸಲಾಗಿದೆ. ಉಳಿದ ಗಾಯಾಳುಗಳಿಗೆ ಕಳ್ಳಂಬೆಳ್ಳ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗಿದೆ. ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಕೆ.ವಿ. ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

<><*<><>*><>

ಜನಪದ, ಸಾಮೂಹಿಕ ನಾಯಕತ್ವದ ಮೇಲೆ ಗಾಢವಾದ ನಂಬಿಕೆ ಇಟ್ಟಿರುವ ಜೀವನ ಸಿದ್ಧಾಂತವಾಗಿದೆ ಎಂದು ಆಂಧ್ರಪ್ರದೇಶದ ಕೇಂದ್ರೀಯ ಬುಡಕಟ್ಟು ವಿಶ್ವವಿದ್ಯಾಲಯದ ಕುಲಪತಿ ಪ್ರೊಫೆಸರ್ ಟಿ.ವಿ. ಕಟ್ಟಿಮನಿ ಅಭಿಪ್ರಾಯಪಟ್ಟಿದ್ದಾರೆ. ಹಾವೇರಿ ಜಿಲ್ಲೆಯ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಹಿರೇತಿಟ್ಟು ಬಯಲು ರಂಗಮಂದಿರದಲ್ಲಿಂದು ನಡೆದ ೮ ಮತ್ತು ೯ನೇ ಘಟಿಕೋತ್ಸವದಲ್ಲಿ ಮಾತನಾಡಿದ ಅವರು, ಜನಪದವು ಸಂಗೀತ, ನಾಟಕ, ಬಯಲಾಟ, ದಪ್ಪಿನಾಟ, ಜನಪದ ನೃತ್ಯ, ಸಿರಿಧಾನ್ಯ, ಸಹಜ ಜೀವನ ಪದ್ಧತಿ, ಯೋಗ, ಧ್ಯಾನದ ಮೂಲಕ ಸುಖ ಸಂತೋಷ ತರಬಲ್ಲದು ಎಂದು ತಿಳಿಸಿದ್ದಾರೆ.

ಘಟಿಕೋತ್ಸವದಲ್ಲಿ ಒಟ್ಟು ೫೪೩ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. ಜೊತೆಗೆ ಜಾನಪದ ಕ್ಷೇತ್ರದಲ್ಲಿ ವಿಶೇಷ ಸಾಧನೆ ಮಾಡಿದ ಆರು ಮಂದಿಗೆ ಗೌರವ ಡಾಕ್ಟರೇಟ್ ನೀಡಿ ಗೌರವಿಸಲಾಯಿತು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**